ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ : 2017-18ನೇ ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ರಾಜ್ಯ ಸಹಾಯಧನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ :
1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ 253/153/2017-Biogas, ದಿನಾಂಕ 29.10.2017.
2. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ 28 ಜೈಅಯೋ 2017, ದಿನಾಂಕ 04.07.2017.
3. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ 57 ಜೈಅಯೋ 2017, ದಿನಾಂಕ 31.08.2017.

**ಪ್ರಸ್ತಾವನೆ :**

ಮೇಲೆ (1)ರಲ್ಲಿ ಓದಲಾದಂತೆ ನವ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳ ಮಂತ್ರಾಲಯ, ನವ ದೆಹಲಿ ರವರು **2017-18ನೇ** ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಗೊಬ್ಬರ ಮತ್ತು ನಿರ್ವಹಣೆ(NBMMP) ಕಾರ್ಯಕ್ರಮದಡಿ ನಿಗದಿಪಡಿಸಿದ 10000 ಜೈವಾನಿಲ ಸ್ಥಾವರಗಳ(SC&ST ವರ್ಗ ಸೇರಿದಂತೆ) ಭೌತಿಕ ಗುರಿಗೆ ಸಂಬಂಧಿಸಿದಂತೆ ಮೊದಲನೇ ಕಂತಿನ ಕೇಂದ್ರ ಸಹಾಯಧನ **ರೂ.412.50ಲಕ್ಷವನ್ನು ಕಾರ್ಯಕ್ರಮದ ಅನುಷ್ಠಾನಕ್ಕಾಗಿ RTGS** ಮೂಲಕ ಕಾರ್ಯಕ್ರಮದ ಉಳಿತಾಯ ಖಾತೆಗೆ ಬಿಡುಗಡೆ ಮಾಡಿದೆ.

2017-18ನೇ ಸಾಲಿಗೆ ರಾಜ್ಯ ಆಯವ್ಯಯದ ಲೆಕ್ಕ ಶೀರ್ಷಿಕೆ 2810-00-101-0-01(2810-60-196-6-01) ರಡಿ ರೂ.1214.00ಲಕ್ಷಗಳನ್ನು ನಿಗದಿಪಡಿಸಿದ್ದು, ಆರ್ಥಿಕ ಇಲಾಖೆಯು ಈಗಾಗಲೇ ರೂ.303.50ಲಕ್ಷಗಳನ್ನು ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿದೆ.

2017-18ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿದ ಕೇಂದ್ರ ಸಹಾಯಧನಕ್ಕೆ ಪೂರಕವಾಗಿ ಬಾಗಲಕೋಟೆ, ಬೆಳಗಾವಿ, ಚಿಕ್ಕಬಳ್ಳಾಪುರ, ಕೋಲಾರ ಮತ್ತು ವಿಜಯಪುರ ಜಿಲ್ಲೆಗಳ ಪ್ರಗತಿ ಆಧರಿಸಿ, **ರೂ.74.06ಲಕ್ಷಗಳನ್ನು** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬಾಗಲಕೋಟೆ, ಬೆಳಗಾವಿ, ಚಿಕ್ಕಬಳ್ಳಾಪುರ, ಕೋಲಾರ ಮತ್ತು ವಿಜಯಪುರ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/65/ಜೈಅಯೋ/2017 ಬೆಂಗಳೂರು, ದಿನಾಂಕ 29.01.2018**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ **2017-18ನೇ** ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮದಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ **ರೂ.74.06ಲಕ್ಷ(ಎಪ್ಪತ್ನಾಲ್ಕು ಲಕ್ಷದ ಆರು ಸಾವಿರ ಸಾವಿರ ರೂಪಾಯಿಗಳು ಮಾತ್ರ)**ಗಳನ್ನು ಈ ಕೆಳಕಂಡ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ.ಸಂ | ಜಿಲ್ಲಾ ಪಂಚಾಯತ್ | ಬಿಡುಗಡೆ ಮಾಡಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಬಾಲಕೋಟೆ | 2.30 |
| 2 | ಬೆಳಗಾವಿ | 60.00 |
| 3 | ಚಿಕ್ಕಬಳ್ಳಾಪುರ | 2.50 |
| 4 | ಕೋಲಾರ | 2.88 |
| 5 | ವಿಜಯಪುರ | 6.38 |
| | ಒಟ್ಟು | 74.06 |

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗುತ್ತಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಹಾಗೂ ವ್ಯಪಗತ ಮಾಡತಕ್ಕದಲ್ಲ. ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಸದರಿ ಅನುದಾನವನ್ನು ಗಾಂಧಿ ಸಾಕ್ಷಿ ಕಾಯಕದಡಿ ಇಂಧೀಕರಿಸಿ ಬಿಡುಗಡೆ ಮಾಡತಕ್ಕದ್ದು.

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಲೆಕ್ಕ ಶೀರ್ಷಿಕೆ 2810-60-196-6-01ರಡಿ ವೆಚ್ಚ ಭರಿಸಿ, ನಿಗದಿತ ನಮೂನೆಯಲ್ಲಿ ಹಣಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ನೀಡುವುದು.

ಈ ಆದೇಶವನ್ನು ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ: ಗ್ರಾಅಪ 456 ಪಿಬಿಎಸ್ 2017, ದಿನಾಂಕ 12.12.2017ರಲ್ಲಿ ಸಹಮತಿಯನ್ನು ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್ ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು. ಜಿಲ್ಲಾ ಪಂಚಾಯತ್, ಬಾಗಲಕೋಟೆ, ಬೆಳಗಾವಿ, ಚಿಕ್ಕಬಳ್ಳಾಪುರ, ಕೋಲಾರ ಮತ್ತು ವಿಜಯಪುರ
3. ಜಿಲ್ಲಾ ಖಜಾನಾಧಿಕಾರಿಗಳು, ಬಾಗಲಕೋಟೆ, ಬೆಳಗಾವಿ, ಚಿಕ್ಕಬಳ್ಳಾಪುರ, ಕೋಲಾರ ಮತ್ತು ವಿಜಯಪುರ
4. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
5. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಸರ್ಕಾರದ ಪ್ರದಾನ ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.